# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**05.07.2024 / 18.40 hrs**

ಮುಖ್ಯಾಂಶಗಳು

೧. **ಡೆಂಘೀ ಜ್ವರ ತರುವ ಸೊಳ್ಳೆಗಳ ನಾಶಕ್ಕೆ ರಾಜ್ಯವ್ಯಾಪಿ ಜಾಗೃತಿ ಅಭಿಯಾನ ಆರಂಭ**

೨. **ಶಿವಮೊಗ್ಗ -ಚೆನ್ನೈ ನಡುವೆ ನೂತನ ರೈಲು ಸಂಚಾರ ಆರಂಭಕ್ಕೆ ಸದ್ಯದಲ್ಲೇ ದಿನಾಂಕ ನಿಗದಿ**

೩. **ವಿಜಯಪುರ ಜಿಲ್ಲೆಯ ತಾಳಿಕೋಟೆಯಲ್ಲಿ ನೀತಿಆಯೋಗದ ಸಂಪೂರ್ಣತಾ ಅಭಿಯಾನ**

೪. **ಉಡುಪಿ ಜಿಲ್ಲೆಗೆ ಮುಂದಿನ ೫ ದಿನ ಭಾರೀ ಮಳೆಯ ಮುನ್ಸೂಚನೆ; ಅಗತ್ಯ ಮುನ್ನಚ್ಚರಿಕೆ**

**<><*<><>*><>**

ರಾಜ್ಯದ ಹಲವು ಜಿಲ್ಲೆಗಳಲ್ಲಿ ಡೆಂಘೀ ಜ್ವರದ ಪ್ರಕರಣಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಮತ್ತು ನಿಯಂತ್ರಣ ಕುರಿತಂತೆ ಜಗಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಪ್ರತೀ ಶುಕ್ರವಾರ ಸೊಳ್ಳೆ ನಿರ್ಮೂಲನೆ ದಿನವೆಂದು ವಿಭಿನ್ನವಾಗಿ ಆಚರಿಸಲಾಗುತ್ತಿದೆ. ನೀರು ಸಂಗ್ರಹಣೆಯಲ್ಲಿ ಸೂಕ್ತ ಎಚ್ಚರ ವಹಿಸಬೇಕು. ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದು ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ. ಡೆಂಘೀ ಜ್ವರಕ್ಕೆ ಕಾರಣವಾಗುವ ಈಡಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಬೃಹತ್ ಅಭಿಯಾನಕ್ಕೆ ಮಂಗಳೂರಿನಲ್ಲಿಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಿದರು. ಅಧಿಕಾರಿಗಳೊಂದಿಗೆ ಮನೆ ಮನೆಗೆ ತೆರಳಿ ನೀರು ಸಂಗ್ರಹಿಸುವ ಸ್ಥಳಗಳನ್ನು ಪರಿಶೀಲಿಸಿದರು. ಡೆಂಘೀ ನಿಯಂತ್ರಣಕ್ಕೆ ಪ್ರತಿ ಶುಕ್ರವಾರ ರಾಜ್ಯಾದ್ಯಂತ ಆರೋಗ್ಯ ಇಲಾಖೆ, ಈ ಕಾರ್ಯಕ್ರಮವನ್ನು ನಡೆಸಲಿದೆ. ಡಿಂಘೀ ಪ್ರಕರಣಗಳು ಹೆಚ್ಚಾಗಿ ವರದಿಯಾಗಿರುವ ಹಾಟ್‌ಸ್ಪಾಟ್‌ಗಳನ್ನು ಗುರುತಿಸಿ ಫೀವರ್ ಕ್ಲಿನಿಕ್‌ಗಳನ್ನು ತೆರಯಲು ಸೂಚಿಸಲಾಗಿದೆ. ಇಂತಹ ಸ್ಥಳಗಳಲ್ಲಿ ಜ್ವರ ಬಂದವರೆಗೆ ಡೆಂಘೀ ಪರೀಕ್ಷೆಯನ್ನು ತುರ್ತಾಗಿ ನಡೆಸಿ ಚಿಕಿತ್ಸೆ ಒದಗಿಸಲು ಸೂಚಿಸಲಾಗಿದೆ ಎಂದು ಸಚಿವರು ಹೇಳಿದರು. ಧಾರವಾಡದ ಕೆಲಗೇರಿಯಲ್ಲಿಂದು ನಡೆದ ಜಾಗೃತಿ ಕಾರ್ಯಕ್ರಮದಲ್ಲಿ ಮನೆಮನೆಗೆ ತೆರಳಿ ಡೆಂಘೀ ರೋಗದ ಬಗ್ಗೆ ಮಾಹಿತಿ ನೀಡುವ ಕರಪತ್ರ ವಿತರಿಸಲಾಯಿತು. ಜಿಲ್ಲಾಡಳಿತ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳು ಜಾಥ ಮೂಲಕ ತೆರಳಿ ನೀರಿನ ತೊಟ್ಟಿಗಳಿಗೆ ಲಾರ್ವ ಹಾಗೂ ಸೊಳ್ಳೆಯ ಮೊಟ್ಟೆಗಳನ್ನು ತಿನ್ನುವ ಗಪ್ಪಿ ಮೀನು ಬಿಡುವ ಕಾರ್ಯಕ್ಕೆ ಚಾಲನೆ ನೀಡಲಾಯಿತು. ಚಿತ್ರದುರ್ಗ ಜಿಲ್ಲಾಡಳಿತದ ವತಿಯಿಂದ ಇಂದು ಡೆಂಘೀ ಸೊಳ್ಳೆ ನಿವಾರಣೆ ಜಾಗೃತಿಯ ಜಾಥ ನಡೆಯಿತು. ಕಳೆದ ವರ್ಷಕ್ಕೆ ಹೋಲಿಸಿದರೇ, ಈ ವರ್ಷ ಜಿಲ್ಲೆಯಲ್ಲಿ ಡೆಂಘೀ ಪ್ರಕರಣಗಳು ಹೆಚ್ಚಾಗಿದ್ದು, ಸಾರ್ವಜನಿಕರು ಈ ರೋಗದ ಬಗ್ಗೆ ಸೂಕ್ತ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಹೇಳಿದರು. ಚಿತ್ರದುರ್ಗದ ಬುದ್ಧ ನಗರದಲ್ಲಿ ಮನೆಮನೆಗೆ ಭೇಟಿ ನೀಡಿ ನೀರು ಸಂಗ್ರಹ ವ್ಯವಸ್ಥೆಯನ್ನು ಪರಿಶೀಲಿಸಲಾಯಿತು. ಡೆಂಘೀ ಜ್ವರ ತರುವ ಸೊಳ್ಳೆಗಳ ನಿವಾರಣೆಗೆ ವಹಿಸಬೇಕಾದ ಕ್ರಮಗಳ ಬಗ್ಗೆ ಜನ ಜಾಗೃತಿ ಮೂಡಿಸಲಾಯಿತು. ಚಿಕ್ಕಮಗಳೂರಿನ ದೋಣಿ ಕಣ ಬಡಾವಣೆಯಲ್ಲಿಂದು ಡೆಂಘೀ ನಿಯಂತ್ರಣ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸಾರ್ವಜನಿಕರು ತಮ್ಮ ಸುತ್ತಮುತ್ತಲ ಪರಿಸರದ ಸ್ವಚ್ಛಗೆ ಆದ್ಯತೆ ನೀಡಬೇಕು. ರಾಜ್ಯದಲ್ಲಿ ಬೆಂಗಳೂರು ಹೊರತು ಪಡಿಸಿದರೆ, ಅತಿ ಹೆಚ್ಚು ಡೆಂಘೀ ಪ್ರಕರಣಗಳು ಚಿಕ್ಕಮಗಳೂರು ಜಿಲ್ಲೆಯಲ್ಲಿ ದಾಖಲಾಗಿರುವುದು ಕಳವಳದ ವಿಷಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಹೇಳಿದರು

**<><*<><>*><>**

ಶಿವಮೊಗ್ಗ-ಚೆನ್ನೈ ನಡುವೆ ನೂತನ ರೈಲು ಸಂಚಾರ ಸಂಚಾರಕ್ಕೆ ಕೇಂದ್ರ ರೈಲ್ವೆ ಸಚಿವರು ಮಂಜೂರಾತಿ ನೀಡಿದ್ದು, ಸದ್ಯದಲ್ಲೇ ಉದ್ಘಾಟನೆ ದಿನಾಂಕವನ್ನು ಪ್ರಕಟಿಸಲಾಗುವುದು ಎಂದು ಶಿವಮೊಗ್ಗ ಸಂಸದ ಬಿ.ವೈ. ರಾಘವೇಂದ್ರ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೂತನ ರೈಲು ಸಂಜೆ ೪ ಗಂಟೆಗೆ ಶಿವಮೊಗ್ಗದಿಂದ ಹೊರಟು ಬೆಳಗ್ಗೆ ೪.೪೫ ಕ್ಕೆ ತಲುಪಲಿದೆ. ಚೆನ್ನೈನಿಂದ ರಾತ್ರಿ ೧೧.೩೦ ಕ್ಕೆ ಹೊರಟು ಮರುದಿನ ಮಧ್ಯಾಹ್ನ ೧ ಗಂಟೆಗೆ ಶಿವಮೊಗ್ಗ ತಲುಪಲಿದೆ ಎಂದು ತಿಳಿಸಿದರು. ಶಿವಮೊಗ್ಗ-ಬೀರೂರು ೬೨ ಕಿಲೀಮೀಟರ್ ರೈಲ್ವೆ ಮಾರ್ಗ ಡಬ್ಲಿಂಗ್ ಕಾರ್ಯಕ್ಕೆ ನೈಋತ್ಯ ರೈಲ್ವೆ ವತಿಯಿಂದ ರೈಲ್ವೆ ಸಚಿವಾಲಯಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ಇದಕ್ಕೂ ಶೀಘ್ರದಲ್ಲೇ ಅನುಮೋದನೆ ದೊರೆಯುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದರು. ಶಿವಮೊಗ್ಗದಿಂದ ಕರಾವಳಿಗೆ ರೈಲ್ವೆ ಸಂಪರ್ಕ ಕಲ್ಪಿಸುವ ಪ್ರಯತ್ನ ಆರಂಭಿಸಲಾಗಿದೆ. ಶಿವಮೊಗ್ಗ-ಬೀರೂರು-ಕಡೂರು ಮೂಲಕ ಸಕಲೇಶಪುರ ಮತ್ತು ಬೇಲೂರಿಗೆ ರೈಲ್ವೆ ಸಂಪರ್ಕ ಕಲ್ಪಿಸಲು

ಯೋಜಿಸಲಾಗಿದೆ. ಇದರಿಂದ ಮಂಗಳೂರು, ಸುಬ್ರಮಣ್ಯಕ್ಕೆ ನೇರ ರೈಲ್ವೆ ವ್ಯವಸ್ಥೆ ಸಾಧ್ಯವಾಗಲಿದೆ ಎಂದು ಅವರು ಮಾಹಿತಿ ನೀಡಿದರು.

**<><*<><>*><>**

ವಿಜಯಪುರ ಜಿಲ್ಲೆಯ ತಾಳಿಕೋಟೆಯಲ್ಲಿ ನೀತಿ ಆಯೋಗದ ಆರೋಗ್ಯ, ಪೋಷಣೆ ಹಾಗೂ ಕೃಷಿ ಸಂಬಂಧಿತ ಸಂಪೂರ್ಣತಾ ಅಭಿಯಾನ ಆರಂಭವಾಗಿದ್ದು, ಸೆಪ್ಟಂಬರ್ ೩೦ರವರೆಗೆ ಕಾರ್ಯಕ್ರಮಗಳು ನಡೆಯಲಿವೆ. ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ತಾಲೂಕುಗಳಲ್ಲಿ ಆರು ಪ್ರಮುಖ ಕಾರ್ಯಕ್ಷಮತೆ ಸೂಚಕಗಳಲ್ಲಿ ಮುಂದಿನ ಮೂರು ತಿಂಗಳ ಅವಧಿಯಲ್ಲಿ ಶೇಕಡ ೧೦೦ ರಷ್ಟು ಪ್ರಗತಿ ಸಾಧಿಸುವ ಗುರಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂ ಬಾಲನ್ ತಿಳಿಸಿದರು. ತಾಳಿಕೋಟೆ ತಾಲೂಕನ್ನು ಮಹತ್ವಾಕಾಂಕ್ಷಿ ತಾಲೂಕು ಎಂದು ಆಯ್ಕೆ ಮಾಡಲಾಗಿದೆ. ಆರೋಗ್ಯ, ಶಿಕ್ಷಣ, ಮೂಲ ಸೌಲಭ್ಯ, ನೀರಾವರಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸುಧಾರಣೆ ತರುವ ಮೂಲಕ ಜನರ ಜೀವನಮಟ್ಟವನ್ನು ಉತ್ತಮಪಡಿಸುವ ಉದ್ದೇಶವನ್ನು ಈ ಅಭಿಯಾನ ಹೊಂದಿದೆ ಎಂದು ಜಿಲ್ಲಾ ಪಂಚಾಯಿತಿ ಸಿಇಒ ರಿಷಿ ಆನಂದ್ ಹೇಳಿದರು. ಕೇಂದ್ರ ಸರ್ಕಾರದ ಪ್ರಮುಖ ಯೋಜನೆಗಳಿಗೆ ತಾಳಿಕೋಟೆ ತಾಲೂಕಿನ ಆಯ್ದ ಅರ್ಹ ಫಲಾನುಭವಿಗಳನ್ನು ಗುರುತಿಸಲಾಯಿತು.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ರೈತರ ಜಮೀನುಗಳನ್ನು ಪೋಡಿ ಮುಕ್ತ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕು. ರೈತರು ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ ಅವರ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ. ಜಿಲ್ಲೆಯ ಪ್ರತಿ ತಾಲೂಕಿನಲ್ಲಿ ರುದ್ರಭೂಮಿಗಳಿಗೆ ಸೂಕ್ತ ಬೇಲಿ ಅಳವಡಿಸಬೇಕು. ರಸ್ತೆಗಳ ನಿರ್ಮಾಣದಲ್ಲಿ ಭವಿಷ್ಯದ ಅಗತ್ಯಗಳನ್ನು ಪರಿಗಣಿಸಬೇಕು ಎಂದೂ ಸಹ ಸಚಿವರು ಸೂಚಿಸಿದರು.

**<><*<><>*><>**

ಉಡುಪಿ ಜಿಲ್ಲೆಯಲ್ಲಿ ಮುಂದಿನ ೫ ದಿನಗಳ ಕಾಲ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿದೆ ಎಂದು ರಾಜ್ಯ ವಿಪತ್ತು ನಿರ್ವಹಣಾ ಪಡೆ ಮುನ್ಸೂಚನೆ ನೀಡಿದ್ದು. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧಿಕಾರಿಗಳು, ಮೀನುಗಾರರಿಗೆ ಹಾಗೂ ಸಾರ್ವಜನಿಕರಿಗೆ ಸಮುದ್ರಕ್ಕೆ ಇಳಿಯಬಾರದು ಎಂದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯ ಕೆಲವೆಡೆ ಗಾಳಿ ಮತ್ತು ಮಳೆಯಿಂದ ಹಾನಿಯಾಗಿರುವ ಕುರಿತು ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾಹಿತಿ ಪಡೆದಿದ್ದಾರೆ ಎಂದು ನಮ್ಮ ಜಿಲ್ಲಾ ಪ್ರತಿನಿಧಿ ನಿಶ್ಚಿತ ವರದಿ ಮಾಡಿದ್ದಾರೆ.

**<><*<><>*><>**

ಉತ್ತರಕನ್ನಡ ಜಿಲ್ಲೆಯಲ್ಲಿ ಕಾಳಿ ನದಿ ಜಲ ವಿದ್ಯುತ್ ಯೋಜನೆಯ ಕದ್ರಾ ಜಲಾನಯನ ಪ್ರದೇಶದಲ್ಲಿ ಸತತ ಮಳೆಯಾಗುತ್ತಿದ್ದು, ಜಲಾಶಯಕ್ಕೆ ಒಳಹರಿವಿನ ಪ್ರಮಾಣ ಹೆಚ್ಚಾಗಿದೆ. ೩೪.೫೦ ಮೀಟರ್ ಸಾಮರ್ಥ್ಯದ ಜಲಾಶಯದಲ್ಲಿ ಇಂದು ನೀರಿನ ಮಟ್ಟ ೩೦.೩೩ ಮೀಟರ್ ತಲುಪಿದೆ. ಜಲಾಶಯದ ಸುರಕ್ಷತಾ ದೃಷ್ಟಿಯಿಂದ ಹೆಚ್ಚುವರಿ ನೀರನ್ನು ಯಾವುದೇ ಸಮಯದಲ್ಲಿ ಹೊರಬಿಡಲಾಗುವುದು. ಕದ್ರಾ ಜಲಾಶಯದ ಕೆಳದಂಡೆ ಹಾಗೂ ನದಿಯ ಪಾತ್ರದ ನಿವಾಸಿಗಳು, ಸೂಕ್ತ ಮುಂಜಾಗೃತೆ ವಹಿಸಬೇಕು. ಮಳೆಗಾಲ ಮುಗಿಯುವವರೆಗೂ ಮೀನುಗಾರಿಕೆ, ದೋಣಿ ಸಂಚಾರ ಮತ್ತಿತರ ಚಟುವಟಿಕೆ ನಡೆಸಬಾರದೆಂದು ಕೆ.ಪಿ.ಸಿ ಅಧಿಕಾರಿಗಳು ಪ್ರಕಟಣೆಯಲ್ಲಿ ಸೂಚಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳಲ್ಲಿ ಪ್ರದೇಶವಾರು ಬಳಕೆಯ ಆಹಾರ ಸಿದ್ದಪಡಿಸಲು ಸದ್ಯದಲ್ಲೇ ಕ್ರಮ ಕೈಗೊಳ್ಳಲಾಗುವುದು ಎಂದು ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಮ್ ಖಾನ್ ತಿಳಿಸಿದ್ದಾರೆ. ಚಾಮರಾಜನಗರದಲ್ಲಿಂದು ಮಾತನಾಡಿದ ಅವರು, ಇಂದಿರಾ ಕ್ಯಾಂಟೀನ್‌ಗಳ ಸುಧಾರಣೆಗೆ ೫೦ ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ. ಉತ್ತರಕರ್ನಾಟಕ, ಕರಾವಳಿ ಮತ್ತು ಮೈಸೂರು ವಲಯದ ವಿಭಿನ್ನ ಬಗೆಯ ತಿಂಡಿ-ತಿನಿಸುಗಳನ್ನು ಇಂದಿರಾ ಕ್ಯಾಂಟಿನ್‌ಗಳಲ್ಲಿ ತಯಾರಿಸಲಾಗುವುದು ಎಂದು ಅವರು ಹೇಳಿದರು.

**<><*<><>*><>**

ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸಲು ಬ್ಯಾಂಕ್‌ಗಳು ಶ್ರಮವಹಿಸಬೇಕು ಎಂದು ಕೋಲಾರ ಸಂಸದ ಎಂ.ಮಲ್ಲೇಶ್ ಬಾಬು ಹೇಳಿದ್ದಾರೆ. ಕೋಲಾರದಲ್ಲಿಂದು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ, ಮುದ್ರಾ ಯೋಜನೆ, ಪಿಎಂ ಉದ್ಯೋಗ ಸೃಷ್ಟಿ ಯೋಜನೆ, ರಾಷ್ಟ್ರೀಯ ಜಾನುವಾರು ಮಿಷನ್ ಮೊದಲಾದ

ಯೋಜನೆಗಳ ಮೂಲಕ ಸಹಾಯದ ಧನ ನೀಡುತ್ತಿದೆ. ಇವುಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು ಹೇಳಿದರು.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು-೧**

೧. ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ತನಿಖೆ ನಡೆಸಲು ನ್ಯಾಯಾಂಗ ಸಮಿತಿ ರಚಿಸಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಆದೇಶ ಹೊರಡಿಸಿದ್ದಾರೆ. ಕರ್ನಾಟಕ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಅಶೋಕ್ ಬಿ.ಹಿಂಚಿಗೇರಿ ಅವರಿಗೆ ತನಿಖೆಯ ಜವಾಬ್ದಾರಿ ನೀಡಲಾಗಿದೆ. ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಹಾಗೂ ವಿಶ್ವವಿದ್ಯಾಲಯಕ್ಕೆ ಸಂಯೋಜಿತವಾಗಿರುವ ಕೃಪಾನಿಧಿ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ ವಿರುದ್ಧ ಹಲವು ದೂರುಗಳು ಸಲ್ಲಿಕೆಯಾಗಿದ್ದವು. ದೂರುಗಳ ಸತ್ಯಾಸತ್ಯತೆ ಪರಿಶೀಲಿಸಿ, ಮೂರು ತಿಂಗಳ ಒಳಗೆ ವರದಿ ಸಲ್ಲಿಸುವಂತೆ ರಾಜ್ಯಪಾಲರು ಸೂಚಿಸಿದ್ದಾರೆ.

೨. ಉಡುಪಿ ಜಿಲ್ಲೆಯ ಬ್ರಹ್ಮಾವರದ ವಾರಂಬಳ್ಳಿ ಗ್ರಾಮ ಪಂಚಾಯತ್‌ನ ಮೀನು ಮಾರುಕಟ್ಟೆಯಲ್ಲಿ ಸಾರ್ವಜನಿಕರಿಗೆ ಡೆಂಘಿ ಜ್ವರ ನಿಯಂತ್ರಣ ಕುರಿತು ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ಜಾಗೃತಿ ಹಾಗೂ ಪ್ರತಿ ಶುಕ್ರವಾರ ಒಣ ದಿನ ಆಚರಣೆಯ ಅಭಿಯಾನಕ್ಕೆ ಇಂದು ಜಿಲ್ಲಾಧಿಕಾರಿ ಡಾ. ಕೆ ವಿದ್ಯಾ ಕುಮಾರಿ ಅವರು ಚಾಲನೆ ನೀಡಿದರು.

೩. ಹೊರಗುತ್ತಿಗೆ ನೇಮಕಾತಿಗಳಲ್ಲಿ ಮೀಸಲಾತಿ ನಿಯಮಗಳನ್ನು ಅಳವಡಿಸಿ ಹೊರಡಿಸಿರುವ ರಾಜ್ಯ ಸರ್ಕಾರದ ಸುತ್ತೋಲೆಯನ್ನು ಸ್ವಾಗತಿಸುವುದಾಗಿ ದಲಿತ ಸಂಘರ್ಷ ಸಮಿತಿ ಪ್ರಕಟಣೆ ನೀಡಿದೆ. ಹಲವು ವರ್ಷಗಳ ಕಾಲ ಉದ್ಯೋಗ ನೇಮಕಾತಿ ಪ್ರಕ್ರಿಯೆಗಳೇ ನಡೆಯದೆ ಅಹಿಂದ ಸಮುದಾಯದ ಯುವ ಜನತೆ ನಿರುದ್ಯೋಗ ಸಮಸ್ಯೆಗೆ ಸಿಲುಕಿದ್ದರು. ರಾಜ್ಯ ಸರ್ಕಾರದ ಸುತ್ತೋಲೆಯು ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಪ್ರಮುಖ ಹೆಜ್ಜೆಯಾಗಲಿದೆ ಎಂದು ಹೇಳಲಾಗಿದೆ.

೪. ವಿಜಯನಗರ ಜಿಲ್ಲೆಯ ಹೊಸಪೇಟೆ ಸಮೀಪದ ಜಂಬೂನಾಥನ ಗುಡ್ಡದಲ್ಲಿಂದು ವನಮಹೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಪರಿಸರ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯ. ವರ್ಷಕ್ಕೆ ಐದು ಗಿಡಗಳನ್ನಾದರೂ ಬೆಳೆಸುವಂತೆ ಪ್ರತೀ ಶಾಲಾ ವಿದ್ಯಾರ್ಥಿಗೂ ತಿಳಿಸಬೇಕು ಎಂದು ಶಾಸಕ ಎಚ್.ಆರ್.ಗವಿಯಪ್ಪ ಸಲಹೆ ನೀಡಿದರು.

೫. ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ವಿದ್ಯುತ್ ಉಪ ಕೇಂದ್ರದಿಂದ ನೂತನ ಉಳಿಕೆ ಲಿಂಕ್ ಲೈನ್ ಕಾಮಗಾರಿ ಹಿನ್ನೆಲೆಯಲ್ಲಿ ನಾಳೆಯಿಂದ ಈ ತಿಂಗಳ ಹತ್ತನೇ ತಾರೀಖಿನವರೆಗೆ ಚಿಂತಾಮಣಿ ನಗದಲ್ಲಿ ವಿದ್ಯುತ್ ಪೂರೈಕೆ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

೬. ಬಾಗಲಕೋಟೆಯಲ್ಲಿಂದು ಜಿಲ್ಲಾ ಮಟ್ಟದ ಕೇಬಲ್ ಟೆಲಿವಿಷನ್ ಕಾಯ್ದೆಯ ನಿರ್ವಹಣಾ ಸಮಿತಿ ಸಭೆ ನಡೆಯಿತು. ಕೇಬಲ್ ಟಿವಿ ನೆಟ್‌ವರ್ಕ್ ಕಾಯ್ದೆಯನ್ನು ಉಲ್ಲಂಘಿಸಿದ್ದಲ್ಲಿ ಕೇಬಲ್ ಆಪರೇಟರ್‌ಗಳ ಉಪಕರಣಗಳನ್ನು ಮುಟ್ಟುಗೋಲು ಹಾಕಿಕೊಳ್ಳಬಹುದು. ಸ್ಥಳೀಯ ಕೇಬಲ್ ಚಾನೆಲ್‌ಗಳು ಹಾಗೂ ಕೇಬಲ್ ಆಪರೇಟರ್‌ಗಳು ತಾವು ಪ್ರಸಾರ ಮಾಡುವ ಎಲ್ಲ ಕಾರ್ಯಕ್ರಮಗಳ ದಾಖಲೆಗಳನ್ನು ಇಟ್ಟಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಾನಕಿ.ಕೆ.ಎಂ ಸೂಚಿಸಿದರು.

**<><*<><>*><>**

ರಾಜ್ಯದ ಕರಾವಳಿಯಲ್ಲಿ ನೈಋತ್ಯ ಮುಂಗಾರು ಸಾಧಾರಣವಾಗಿದ್ದು, ಒಳನಾಡಿನಲ್ಲಿ ದುರ್ಬಲವಾಗಿದೆ. ಮಂಕಿಯಲ್ಲಿ ೧೫ ಸೆಂಟಿಮೀಟರ್, ಅಂಕೋಲಾ ಮತ್ತು ಕಾರವಾರ ವೀಕ್ಷಣಾಲಯ ೧೧, ಗೋಕರ್ಣ ೯, ಶಿರಾಲಿ ಮತ್ತು ಕುಮಟಾದಲ್ಲಿ ೮ ಸೆಂಟಿಮೀಟರ್ ಹಾಗು ಕದ್ರಾದಲ್ಲಿ ೬ ಸೆಂಟಿಮೀಟರ್‌ನಷ್ಟು ಭಾರೀ ಮಳೆಯಾಗಿದೆ. ಮುನ್ಸೂಚನೆಯಂತೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಜೋರು ಗಾಳಿ ಸಹಿತ ಮಳೆ ನಿರೀಕ್ಷಿತ. ಬೆಂಗಳೂರು ಮತ್ತು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣವಿರಲಿದ್ದು, ಆಗಾಗ ಗಾಳಿ ಮತ್ತು ಮಳೆ ಸಾಧ್ಯತೆ. ಗರಿಷ್ಠ ೨೯, ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಇರಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>**